ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೦

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೇಳನೇ ಅಧಿವೇಶನ**
**(ಮುಂದುವರೆದ ಉಪವೇಶನ)**
**ಸೋಮವಾರ, ದಿನಾಂಕ: ೧೬ನೇ ಮಾರ್ಚ್, ೨೦೧೫**

---

**ಸಮೂಹ – I**

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು
೨. ಸಾರಿಗೆ ಸಚಿವರು
೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು
೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು
೫. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು
೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## ೨೦೧೩–೧೪ನೇ ಸಾಲಿನ ಹೋಬಳಿಗೊಂದು ವಸತಿ ಶಾಲೆ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೧೩೬ (೧೪೦೬) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸಮಾಜ ಕಲ್ಯಾಣ ಇಲಾಖೆಯಿಂದ ೨೦೧೩–೧೪ನೇ ಸಾಲಿನ ಬಜೆಟ್‌ನಲ್ಲಿ ಸರ್ಕಾರ ಹೋಬಳಿಗೊಂದು ವಸತಿ ಶಾಲೆ ನಿರ್ಮಿಸುವುದಾಗಿ ಘೋಷಿಸಿದೆಯೇ;

(ಆ) ಹಾಗಿದ್ದಲ್ಲಿ, ಈ ಕಾರ್ಯಕ್ರಮದ ಅಡಿಯಲ್ಲಿ ೨೦೧೩ರಿಂದ ಎಷ್ಟು ಹೋಬಳಿಗಳಲ್ಲಿ ವಸತಿ ನಿಲಯಗಳನ್ನು ನಿರ್ಮಾಣ ಮಾಡಲಾಗಿದೆ ;

(ಇ) ರಾಜ್ಯದ ಯಾವ ಯಾವ ಹೋಬಳಿಗಳಲ್ಲಿ ವಸತಿ ಶಾಲೆಗಳನ್ನು ನಿರ್ಮಿಸಲಾಗಿದೆ ?

## ಹೆಚ್೧–ಎನ್೧ ರೋಗವನ್ನು ನಿಯಂತ್ರಿಸುವ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

**ಶ್ರೀ ರಘುನಾಥ್‌ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೧೩೭ (೧೪೪೬+೧೩೦೭+೧೪೫೩) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಎಚ್೧–ಎನ್೧ ಮಹಾಮಾರಿ ವ್ಯಾಪಕವಾಗಿ ಹರಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಇದುವರೆವಿಗೂ ಎಷ್ಟು ಜನ ಈ ಮಹಾಮಾರಿ ಕಾಯಿಲೆಗೆ ಬಲಿಯಾಗಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಎಚ್೧–ಎನ್೧ ಸೋಂಕಿತ ರೋಗಿಗಳಿಗೆ ಸರಿಯಾದ ಚಿಕಿತ್ಸಾ ಸೌಲಭ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ;

(ಉ) ರಾಜ್ಯದಲ್ಲಿನ ಎಚ್೧–ಎನ್೧ ಸೋಂಕಿನಿಂದ ಬಳಲುತ್ತಿರುವ ಸಾರ್ವಜನಿಕರಿಂದ ಖಾಸಗಿ ಆಸ್ಪತ್ರೆಗಳು ದುಪ್ಪಟ್ಟು ಹಣ ವಸೂಲಿ ಮಾಡುತ್ತಿರುವುದು ಸರ್ಕಾರ ಗಮನಿಸಿದೆಯೇ ;

(ಊ) ಹಾಗಿದ್ದಲ್ಲಿ, ಇಂತಹ ಆಸ್ಪತ್ರೆಗಳು ಯಾವುವು ; ಇವುಗಳ ವಿರುದ್ಧ ಕೈಗೊಂಡ ಕ್ರಮಗಳೇನು ;

(ಋ) ಎಚ್೧–ಎನ್೧ ಮಹಾಮಾರಿಗೆ ಬಲಿಯಾದವರ ಕುಟುಂಬಗಳಿಗೆ ಪರಿಹಾರ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಎ) ಹೊರ ರಾಜ್ಯಗಳಂತೆ ನಮ್ಮ ರಾಜ್ಯದಲ್ಲಿ ಎಚ್೧–ಎನ್೧ ಸೋಂಕಿತರಿಗೆ ಉಚಿತ ಚಿಕಿತ್ಸೆ ನೀಡಲು ಸರ್ಕಾರ ನಿರ್ಧರಿಸಿದೆಯೇ ? (ವಿವರ ನೀಡುವುದು)

## ಬೆಳಗಾವಿ ಬಸ್‌ನಿಲ್ದಾಣವನ್ನು ಹೈಟೆಕ್ ಬಸ್ ನಿಲ್ದಾಣವಾಗಿ ಪರಿವರ್ತಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೧೩೮ (೧೪೬೧) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ಸೆಂಟ್ರಲ್ ಬಸ್ ನಿಲ್ದಾಣ ಅತೀ ಚಿಕ್ಕದಾಗಿದ್ದು, ಜನ ವಸತಿ ಮಧ್ಯದಲ್ಲಿರುವುದರಿಂದ ವಾಹನ ದಟ್ಟಣೆಯನ್ನು ನಿಯಂತ್ರಿಸಲು ಬೇರೆಡೆಗೆ (ಹುಬ್ಬಳ್ಳಿ ಧಾರವಾಡದಲ್ಲಿ ಮಾಡಿದಂತೆ) ಸ್ಥಳಾಂತರಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಆ) ಈಗಿರುವ ಸೆಂಟ್ರಲ್ ಬಸ್ ನಿಲ್ದಾಣವನ್ನು ಸಿಟಿ ಬಸ್ ಸ್ಟ್ಯಾಂಡ್‌ನ್ನಾಗಿ ಪರಿವರ್ತನೆ ಮಾಡಿ ಹಾಗೂ ವರ್ಕ್‌ಶೆಡ್‌ನ್ನು (ಹುಬ್ಬಳ್ಳಿ ಧಾರವಾಡದಲ್ಲಿ ಮಾಡಿದಂತೆ) Short Route ಬಸ್ ಸ್ಟ್ಯಾಂಡ್ ಮಾಡಿ ಪ್ರವಾಸಿಗರಿಗೆ ಅನುಕೂಲ ಮಾಡಿಕೊಡಲಾಗುವುದೇ ;

(ಇ) ಬೆಳಗಾವಿ ರಾಜ್ಯದ ಎರಡನೆಯ ರಾಜಧಾನಿಯಾಗುವ ಎಲ್ಲಾ ಅರ್ಹತೆಗಳನ್ನು ಹೊಂದಿರುವುದರಿಂದ ಹೈಟೆಕ್ ಬಸ್ ಸ್ಟ್ಯಾಂಡ್ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಈ) ಪ್ರತಿದಿನ ಬೆಳಗಾವಿ ಬಸ್ ನಿಲ್ದಾಣದಿಂದ ಹೊರಡುವ ವಾಹನಗಳ ಸಂಖ್ಯೆ ಎಷ್ಟು ಹಾಗೂ ಬೇರೆಡೆಯಿಂದ ಬೆಳಗಾವಿ ಬಸ್ ನಿಲ್ದಾಣಕ್ಕೆ ಬರುವ ವಾಹನಗಳ ಸಂಖ್ಯೆ ಎಷ್ಟು ;

(ಉ) ಸುವರ್ಣ ವಿಧಾನಸೌಧದ ಹತ್ತಿರ ಸೆಂಟ್ರಲ್ ಬಸ್ ನಿಲ್ದಾಣವನ್ನು ನಿರ್ಮಿಸುವುದರಿಂದ ಪ್ರವಾಸಿಗರಿಗೂ ಸಹ ಅನುಕೂಲವಾಗುವುದರಿಂದ ಅಲ್ಲಿ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಚಾಮರಾಜನಗರ ಮತ್ತು ಮೈಸೂರು ಜಿಲ್ಲೆಯಲ್ಲಿನ ಹೆಚ್.ಐ.ವಿ. (ಏಡ್ಸ್) ಪ್ರಕರಣಗಳ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೩೪ (೧೪೪೪) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಾಮರಾಜನಗರ ಮತ್ತು ಮೈಸೂರು ಜಿಲ್ಲೆಯಲ್ಲಿ ವರದಿಯಾಗಿರುವ ಹೆಚ್.ಐ.ವಿ. ಪ್ರಕರಣಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಪುರುಷರು, ಸ್ತ್ರೀಯರು ಮತ್ತು ಮಕ್ಕಳ ತಲಾ ಸಂಖ್ಯೆ ಎಷ್ಟು ; ಆ ಪೈಕಿ ಮೃತಪಟ್ಟ ರೋಗಿಗಳ ಸಂಖ್ಯೆ ಎಷ್ಟು ; ಚಿಕಿತ್ಸೆ ಪಡೆಯುತ್ತಿರುವವರ ಸಂಖ್ಯೆ ಎಷ್ಟು ;

(ಆ) ಜಿಲ್ಲೆಗಳಲ್ಲಿರುವ ಹೆಚ್.ಐ.ವಿ. ಚಿಕಿತ್ಸಾ ಘಟಕ ಅಥವಾ ಕೇಂದ್ರಗಳ ಸಂಖ್ಯೆ ಎಷ್ಟು ; ಹೆಚ್.ಐ.ವಿ. ರೋಗಿಗಳಿಗೆ ಪುನರ್‌ವಸತಿ ಕಲ್ಪಿಸಲು ಕೈಗೊಂಡಿರುವ ಕ್ರಮಗಳೇನು ; (ವಿವರ ಒದಗಿಸುವುದು)

(ಇ) ಕರ್ನಾಟಕ ಏಡ್ಸ್ ಪ್ರಿವೆನ್‌ಷನ್ ಸೊಸೈಟಿಯ ನೌಕರರ ಬೇಡಿಕೆಗಳೇನು ; ಈ ಬೇಡಿಕೆಗಳನ್ನು ಈಡೇರಿಸುವ ಮೂಲಕ ಈ ನೌಕರರು ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸಲು ಪ್ರೋತ್ಸಾಹ ನೀಡಲಾಗುವುದೇ ?

## ಹಾವೇರಿ ಜಿಲ್ಲೆಯಲ್ಲಿ ಎ.ಪಿ.ಎಲ್., ಬಿ.ಪಿ.ಎಲ್. ಮತ್ತು ಅಂತ್ಯೋದಯ ಕಾರ್ಡ್‌ಗಳು

**ಶ್ರೀ ಸೋಮಣ್ಣ. ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೧೪೦ (೧೩೫೫) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾವೇರಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಕುಟುಂಬಗಳಿಗೆ ಎ.ಪಿ.ಎಲ್., ಅಂತ್ಯೋದಯ ಹಾಗೂ ಬಿ.ಪಿ.ಎಲ್ ಕಾರ್ಡ್‌ಗಳನ್ನು ವಿತರಿಸಲಾಗಿದೆ ; ವಿತರಿಸಲು ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪ್ರಸ್ತುತ ಸರ್ಕಾರದಿಂದ ದಿನಾಂಕ: ೩೧–೧೨–೧೪ರವರೆಗೆ ಎಷ್ಟು ಬಿ.ಪಿ.ಎಲ್. ಕಾರ್ಡ್‌ಗಳನ್ನು ರದ್ದುಪಡಿಸಲಾಗಿದೆ ; ಇದಕ್ಕೆ ಕಾರಣಗಳೇನು ;

(ಇ) ಬಿ.ಪಿ.ಎಲ್. ಕಾರ್ಡ್ ಫಲಾನುಭವಿಗಳನ್ನು ಆಯ್ಕೆ ಮಾಡಲು ಮಾನದಂಡಗಳೇನು ; (ವಿವರ ಒದಗಿಸುವುದು)

(ಈ) ಜಿಲ್ಲೆಯಲ್ಲಿ ಎಷ್ಟು ನ್ಯಾಯ ಬೆಲೆ ಅಂಗಡಿಗಳು ಹಾಗೂ ಸೀಮೆ ಎಣ್ಣೆ ವಿತರಕರು ಇದ್ದಾರೆ ? (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ಮಾಹಿತಿ ತಂತ್ರಜ್ಞಾನ ಕಂಪನಿಗಳಲ್ಲಿ ಕನ್ನಡಿಗರನ್ನು ಕಡ್ಡಾಯವಾಗಿ ನೇಮಿಸಿಕೊಳ್ಳುವ ಬಗ್ಗೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೧೪೧ (೧೫೩೩) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಬೆಂಗಳೂರು ಹಾಗೂ ಇತರೆ ನಗರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮಾಹಿತಿ ತಂತ್ರಜ್ಞಾನ ಕಂಪನಿಗಳ ಸಂಖ್ಯೆ ಎಷ್ಟು ಹಾಗೂ ಅವುಗಳು ಯಾವುವು ;

(ಆ) ಈ ಕಂಪನಿಗಳಲ್ಲಿ ಕೆಲಸ ಮಾಡುತ್ತಿರುವ ಒಟ್ಟು ನೌಕರರ ಸಂಖ್ಯೆ ಎಷ್ಟು ;

(ಇ) ಆ ಪೈಕಿ ಕನ್ನಡಿಗರ ಸಂಖ್ಯೆ ಎಷ್ಟು ; ಪ್ರತಿ ಕಂಪನಿವಾರು ಮಾಹಿತಿ ಒದಗಿಸುವುದು ;

(ಈ) ಸರ್ಕಾರದಿಂದ ಎಲ್ಲಾ ಸೌಲಭ್ಯಗಳನ್ನು ಪಡೆದುಕೊಂಡ ಕಂಪನಿಗಳಲ್ಲಿ ಕನ್ನಡಿಗರನ್ನು ಕಡ್ಡಾಯವಾಗಿ ನೇಮಕ ಮಾಡಿಕೊಳ್ಳಬೇಕೆಂಬ ನಿಟ್ಟಿನಲ್ಲಿ ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ಹಿಂದುಳಿದ ವರ್ಗಗಳ ಯೋಜನೆಗಳನ್ನು ಅನುಷ್ಠಾನಗೊಳಿಸುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೨ (೧೩೬೨) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಮೂಲಕ ಅನುಷ್ಠಾನಗೊಳ್ಳುತ್ತಿರುವ ವಿವಿಧ ಯೋಜನೆಗಳಿಗೆ ನಿಗದಿಪಡಿಸಿದ, ಬಿಡುಗಡೆ ಮಾಡಿದ ಮತ್ತು ಖರ್ಚಾದ ಅನುದಾನದ ಮೊತ್ತವೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಗಂಗಾಕಲ್ಯಾಣ ಯೋಜನೆಯಡಿ ವೈಯುಕ್ತಿಕ ಹಾಗೂ ಸಾಮೂಹಿಕ ಬಾವಿ / ಕೊಳವೆ ಬಾವಿ ಪಂಪ್‌ಸೆಟ್ ಅಳವಡಿಕೆಗೆ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಸದರಿ ಆಯ್ಕೆಯಾದ ಫಲಾನುಭವಿಗಳಿಗೆ ಸೌಲಭ್ಯವನ್ನು ಒದಗಿಸಲಾಗಿದೆಯೇ; ಇಲ್ಲವಾದಲ್ಲಿ, ಅದಕ್ಕಿರುವ ಕಾರಣಗಳೇನು ; (ವಿವರ ನೀಡುವುದು)

(ಈ) ಒದಗಿಸಿದ್ದಲ್ಲಿ, ಜಿಲ್ಲಾವಾರು, ತಾಲ್ಲೂಕುವಾರು ಮತ್ತು ಫಲಾನುಭವಿವಾರು ವಿವರ ನೀಡುವುದು ?

## ರೋಡ್ ಟ್ರಾನ್ಸ್‌ಪೋರ್ಟ್ ಅಂಡ್ ಸೇಫ್ಟಿಬಿಲ್‌ಗೆ ರಾಜ್ಯ ಸರ್ಕಾರದ ಆಕ್ಷೇಪದ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) –**

೧೪೩ (೧೪೨೩) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ –

(ಅ) ಕೇಂದ್ರ ಸರ್ಕಾರವು ಜಾರಿಗೆ ತರಲು ಉದ್ದೇಶಿಸಿದ ರೋಡ್ ಟ್ರಾನ್ಸ್‌ಪೋರ್ಟ್ ಅಂಡ್ ಸೇಫ್ಟಿ ಬಿಲ್‌ಗೆ ರಾಜ್ಯ ಸರ್ಕಾರ ಆಕ್ಷೇಪವನ್ನು ಸಲ್ಲಿಸಲಾಗಿದೆಯೇ ; ಸಲ್ಲಿಸಿದ್ದರೆ, ವಿವರ ನೀಡುವುದು ;

(ಆ) ಕೇಂದ್ರ ಸರ್ಕಾರ ಉದ್ದೇಶಿಸಿದ ಬಿಲ್‌ಗೆ ಆಕ್ಷೇಪಣೆಗಳನ್ನು ವ್ಯಕ್ತಪಡಿಸುವಾಗ ಖಾಸಗಿ ವಾಹನಗಳ ಆಪರೇಟರ್‌ಗಳ ಸಲಹೆಯನ್ನು ಪಡೆಯಲಾಗಿದೆಯೇ; (ವಿವರ ನೀಡುವುದು)

(ಇ) ಹೊಸ ಕಾನೂನು ಜಾರಿಗೆ ತಂದಲ್ಲಿ, ಪ್ರಸ್ತುತ ರಾಜ್ಯದಲ್ಲಿರುವ ಸಾರಿಗೆ ಇಲಾಖೆಯ ಅಂಗ ಸಂಸ್ಥೆಗಳಾದ ಕೆ.ಎಸ್.ಆರ್.ಟಿ.ಸಿ., ಬಿ.ಎಂ.ಟಿ.ಸಿ., ಆರ್.ಟಿ.ಓ. ಕಛೇರಿಗಳಿಗೆ ಮತ್ತು ನೌಕರರಿಗೆ ನೂತನ ಕಾನೂನಿನಡಿಯಲ್ಲಿ ರಕ್ಷಣೆ ಇದೆಯೇ; (ವಿವರ ನೀಡುವುದು)

(ಈ) ನೂತನ ಕೇಂದ್ರ ಸರ್ಕಾರದ ಕಾಯಿದೆ ಜಾರಿಗೆ ತಂದಲ್ಲಿ, ರಾಜ್ಯದ ತೆರಿಗೆ ಸಂಗ್ರಹದಲ್ಲಿ ಉಂಟಾಗುವ ನಷ್ಟವೆಷ್ಟು, ಆಡಳಿತ ವ್ಯವಸ್ಥೆಯ ಮೇಲೆ ಬೀರುವ ಪರಿಣಾಮಗಳೇನು ? (ವಿವರ ಒದಗಿಸುವುದು)

## ಹಂದಿಜ್ವರ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

**ಶ್ರಿ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೪ (೧೩೩೪+೧೫೧೩+೧೩೬೪) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ –

(ಅ) ರಾಜ್ಯದಲ್ಲಿ ಹಂದಿಜ್ವರವು ಹರಡಿರುವ ಕುರಿತು ಪೂರ್ಣ ಮಾಹಿತಿ ಒದಗಿಸುವುದು ಹಾಗೂ ಹಂದಿಜ್ವರವಿದೆಯೆಂದು ಖಚಿತಪಡಿಸಿಕೊಳ್ಳಲು ಅಗತ್ಯವಿರುವ ವೈದ್ಯಕೀಯ ತಪಾಸಣೆ ಸೌಲಭ್ಯವು ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಲಭ್ಯವಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹಂದಿಜ್ವರದ ಸೋಂಕಿನ ಚಿಕಿತ್ಸೆಗಾಗಿ ಅಗತ್ಯವಿರುವ ಔಷಧಿಗಳು ಯಾವುವು; ಔಷಧಿಯ ಕೊರತೆ ಇರುವುದು ನಿಜವೇ ;

(ಇ) ಸದರಿ ಔಷಧಿಗಳನ್ನು ಯಾವ ಕಂಪನಿಯಿಂದ ಖರೀದಿಸಲಾಗುತ್ತಿದೆ ; ಸದರಿ ಔಷಧಿಯ ಖರೀದಿಯಲ್ಲಿ ಯಾವುದಾದರೂ ಹಗರಣ ನಡೆದಿರುವುದು ನಿಜವೇ ; (ವಿವರ ನೀಡುವುದು)

(ಈ) ಹಂದಿಜ್ವರದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ಸಲುವಾಗಿ ಸರ್ಕಾರ ಕೈಗೊಂಡ ಕ್ರಮಗಳಾವುವು ; (ಜಿಲ್ಲೆ, ತಾಲ್ಲೂಕು ಮತ್ತು ಗ್ರಾಮವಾರು ವಿವರ ನೀಡುವುದು)

(ಉ) ಈ ಖಾಯಿಲೆಯನ್ನು ಪತ್ತೆ ಹಚ್ಚಲು ಬೆಂಗಳೂರು ನಗರದಲ್ಲಿರುವ ಪರೀಕ್ಷಾ ಕೇಂದ್ರಗಳು ಎಷ್ಟು ; (ವಿವರಗಳನ್ನು ನೀಡುವುದು)

(ಊ) ಹಂದಿಜ್ವರ ಸೋಂಕಿನ ಚಿಕಿತ್ಸೆಗಾಗಿ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಅಗತ್ಯ ಔಷಧಿ ಮಾತ್ರೆಗಳ ದಾಸ್ತಾನು ಇರಿಸಲಾಗಿದೆಯೇ ? (ಹಾಗಿದ್ದಲ್ಲಿ, ದಾಸ್ತಾನಿನ ವಿವರ ನೀಡುವುದು)

## ಮೊರಾರ್ಜಿ ದೇಸಾಯಿ ಶಾಲೆಗೆ ಮೂಲಭೂತ ಸೌಕರ್ಯ ಕಲ್ಪಿಸುವ ಕುರಿತು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೫ (೧೫೦೪) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬಳ್ಳಾರಿ ಜಿಲ್ಲೆಯ ಹಗರಿ ಬೊಮ್ಮನಹಳ್ಳಿ ತಾಲ್ಲೂಕಿನ ವಲ್ಲಭಾಪುರ ಮೊರಾರ್ಜಿ ದೇಸಾಯಿ ಶಾಲೆಯಲ್ಲಿ ಮೂಲಭೂತ ಸೌಕರ್ಯಗಳು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪ್ರಸ್ತುತ ಈ ಮೊರಾರ್ಜಿ ದೇಸಾಯಿ ಶಾಲೆ ಎಷ್ಟು ವಿಸ್ತೀರ್ಣ ಹೊಂದಿರುತ್ತದೆ ಹಾಗೂ ಎಷ್ಟು ಕೊಠಡಿಗಳಿರುವ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ ;

(ಇ) ಈ ಶಾಲೆಯಲ್ಲಿರುವ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ;

(ಈ) ಈ ವಿದ್ಯಾರ್ಥಿಗಳಿಗೆ ಯಾವ ಯಾವ ಕಟ್ಟಡಗಳಲ್ಲಿ ಬೋಧಿಸಲಾಗುತ್ತಿದೆ ;

(ಉ) ಈ ಶಾಲೆಗೆ ಮೂಲಭೂತ ಸೌಲಭ್ಯಗಳಾದ ಸುಸಜ್ಜಿತ ಕಟ್ಟಡ, ಪೀಠೋಪಕರಣ, ಊಟದ ವ್ಯವಸ್ಥೆ ಮುಂತಾದ ಸೌಕರ್ಯಗಳನ್ನು ಸರ್ಕಾರ ಶೀಘ್ರದಲ್ಲಿ ಒದಗಿಸಲು ಕ್ರಮ ಕೈಗೊಳ್ಳುವುದೇ ?

## ಮಂಡ್ಯ ಜಿಲ್ಲಾ ಆಸ್ಪತ್ರೆಯಲ್ಲಿ ವೈದ್ಯರ ಕೊರತೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೬ (೧೩೦೫) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಂಡ್ಯ ಜಿಲ್ಲಾ ಆಸ್ಪತ್ರೆಗೆ ಬರುವ ರೋಗಿಗಳಿಗೆ ವೈದ್ಯರುಗಳು ಸಕಾಲದಲ್ಲಿ ಸಿಗದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ವೈದ್ಯರ ಸೇವಾ ಅವಧಿಯಲ್ಲಿ ರೋಗಿಗಳಿಗೆ ಸ್ಪಂದಿಸಿ ಔಷಧೋಪಚಾರ ನೀಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ಮಂಡ್ಯ ಜಿಲ್ಲಾಸ್ಪತ್ರೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಕೊರತೆಯನ್ನು ನೀಗಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಆಶಾ ಕಾರ್ಯಕರ್ತೆಯರ ಗೌರವಧನ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೭ (೧೩೪೩) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಆರೋಗ್ಯ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಆಶಾ ಕಾರ್ಯಕರ್ತೆಯರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇವರಿಗೆ ಮಾಸಿಕ ಗೌರವಧನ ಅಥವಾ ಸಂಬಳ ನೀಡಲಾಗುತ್ತಿದೆಯೇ ; ಇದರ ಸಂಪೂರ್ಣ ಮಾಹಿತಿ ಒದಗಿಸುವುದು ;

(ಇ) ಇವರಿಗೆ ಸಂಬಳ ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ? (ಮಾಹಿತಿ ನೀಡುವುದು)

## ರಾಜ್ಯದ ಸರ್ಕಾರಿ ಆಸ್ಪತ್ರೆಗಳಿಗೆ ಮಂಜೂರಾಗಿರುವ ಆಂಬ್ಯುಲೆನ್ಸ್‌ಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೮ (೧೪೧೧) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಸರ್ಕಾರಿ ಆಸ್ಪತ್ರೆಗಳಿಗೆ ಮಂಜೂರಾಗಿರುವ ಆಂಬ್ಯುಲೆನ್ಸ್‌ಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಆಂಬ್ಯುಲೆನ್ಸ್‌ಗಳ ಸಂಖ್ಯೆ ಎಷ್ಟು ; ಕಾರ್ಯನಿರ್ವಹಿಸದೆ ಇರುವ ಆಂಬ್ಯುಲೆನ್ಸ್‌ಗ ಸಂಖ್ಯೆ ಎಷ್ಟು ; ಇವುಗಳು ಕಾರ್ಯನಿರ್ವಹಿಸದಿರಲು ಕಾರಣವೇನು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಸರ್ಕಾರಿ ಆಸ್ಪತ್ರೆಗಳಿಗೆ ಮಂಜೂರಾಗಿರುವ ಆಂಬ್ಯುಲೆನ್ಸ್‌ಗಳಿಗೆ ಮಂಜೂರಾಗಿರುವ ಚಾಲಕ ಹುದ್ದೆಗಳ ಸಂಖ್ಯೆ ಎಷ್ಟು ; ಕೊರತೆ ಇರುವ ಚಾಲಕ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಆಂಬ್ಯುಲೆನ್ಸ್‌ಗಳಿಗೆ ಚಾಲಕರನ್ನು ನೇಮಕ ಮಾಡುವಾಗ ಅವರ ಪರವಾನಿಗೆ ಹಾಗೂ ಸೇವಾ ಹಿರಿತನದ ಮೇಲೆ ನೇಮಕ ಮಾಡುವುದನ್ನು ಬಿಟ್ಟು ವಿದ್ಯಾರ್ಹತೆಯ ಮೇಲೆ ನೇಮಕ ಮಾಡುವುದು ಎಷ್ಟು ಸಮಂಜಸ ಮತ್ತು ಈ ಕ್ರಮವನ್ನು ಸರಿಪಡಿಸಲಾಗುವುದೇ ; ಇಲ್ಲವಾದಲ್ಲಿ, ಕಾರಣವೇನು ;

(ಈ) ಸರ್ಕಾರಿ ಆಸ್ಪತ್ರೆಗಳಲ್ಲಿ ಪ್ರಸಕ್ತ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಆಂಬ್ಯುಲೆನ್ಸ್ ಚಾಲಕರುಗಳನ್ನು ಸೇವಾಹಿರಿತನದ ಮೇರೆಗೆ ಖಾಯಂಗೊಳಿಸಲಾಗುವುದೇ ; ಇಲ್ಲವಾದಲ್ಲಿ, ಕಾರಣವೇನು ?

## ಹಾಸ್ಟೆಲ್‌ಗಳಿಗೆ ಸ್ವಂತ ಕಟ್ಟಡ ಹಾಗೂ ಮೂಲ ಸೌಕರ್ಯ ಒದಗಿಸುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೪೯ (೧೪೨೨) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಬಾಲಕ / ಬಾಲಕಿಯರ ಒಟ್ಟು ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ; ಇವುಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ಈ ಹಾಸ್ಟೆಲ್‌ಗಳ ಪೈಕಿ ಎಷ್ಟು ಹಾಸ್ಟೆಲ್‌ಗಳು ಸ್ವಂತ ಕಟ್ಟಡದಲ್ಲಿ ಮತ್ತು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುತ್ತವೆ ;

(ಇ) ಬಾಡಿಕೆ ಕಟ್ಟಡಗಳಿಗೆ ಹಾಸ್ಟೆಲ್‌ನವರು ನಿಗಧಿತ ಸಮಯಕ್ಕೆ ಬಾಡಿಗೆ ಪಾವತಿಸದೇ, ಕಳೆದ ೩ ವರ್ಷಗಳಿಂದ ಸ್ಥಳಾಂತರವಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಈ) ಸದರಿ ಬಾಡಿಗೆ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಸಮರ್ಪಕ ಮೂಲ ಸೌಕರ್ಯ ಹಾಗೂ ವಿದ್ಯಾರ್ಥಿಗಳ ಆರೋಗ್ಯವೃದ್ಧಿಗಾಗಿ ಗುಣಮಟ್ಟದ ಆಹಾರ ವಿತರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಬಾಡಿಗೆ ಕಟ್ಟಡಗಳಲ್ಲಿ ನಡೆಸುತ್ತಿರುವ ಹಾಸ್ಟೆಲ್‌ಗಳಿಗೆ ಸ್ವಂತ ಕಟ್ಟಡ ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸರ್ಕಾರಿ ಆಸ್ಪತ್ರೆಗಳಲ್ಲಿ ವೆಂಟಿಲೇಟರ್‌ಗಳ ಕೊರತೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೫೦ (೧೪೫೫) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಎಷ್ಟು ಆಸ್ಪತ್ರೆಗಳಲ್ಲಿ ವೆಂಟಿಲೇಟರ್ ಸೌಲಭ್ಯ ಇದೆ ; ಸೌಲಭ್ಯ ಹೊಂದಿರದ ಆಸ್ಪತ್ರೆಗಳ ಸಂಖ್ಯೆ ಎಷ್ಟು ;

(ಆ) ವೆಂಟಿಲೇಟರ್ ಕೊರತೆಯ ಕಾರಣಕ್ಕಾಗಿ ಸಾವನ್ನಪ್ಪಿರುವ ರೋಗಿಗಳ ಸಂಖ್ಯೆ ಎಷ್ಟು ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ7, ಕಾ.ಸೂ. 1209, ಪ್ರತಿಗಳು 1500